ಸಿ) ಸಂಘ ಸಂಸ್ಥೆಗಳ ಠೇವಣಿಗಳ ಮೇಲೆ ಪ್ರೋತ್ಸಾಹಕ ಬಹುಮಾನ,

ಳ) ನಗರ ಮತ್ತು ಗ್ರಾಮಾಂತರ ಪ್ರದೇಶಗಳಲ್ಲಿನ ಜನರಿಂದ ಠೇವಣಿ ಸಂಗ್ರಹಿಸಲು ಶೇಷ ವಿಶೇಷ ಆಂದೋಲನ.

ಜಿ) ಅಧಿಕೃತ ಏಜೆಂಟರುಗಳಿಗೆ ಪ್ರೋತ್ಸಾಹಕ ಬಹುಮಾನ.

ಮೈಸೂರು ಮತ್ತು ಬಳ್ಳಾರಿ ವಿಭಾಗಗಳಲ್ಲಿ ನಿರ್ವಾಹಕರ ನೇಮಕ ಸಂದರ್ಭದಲ್ಲಿ ಅವ್ಯವಹಾರ ನಡೆದಿರುವುದು

೪೩೪. ಶ್ರೀ ಡಿ. ಬಿ. ಚಂದ್ರೇಗೌಡ (ತೀರ್ಥಹಳ್ಳಿ).— ಮಾನ್ಯ ಆಹಾರ ಮತ್ತು ನಾಗರೀಕ ಸರಬರಾಜು ಮತ್ತು ಸಾರಿಗೆ ರಾಜ್ಯ ಮಂತ್ರಿಯವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ ?

ಅ) ಮೈಸೂರು ಮತ್ತು ಬಳ್ಳಾರಿ ವಿಭಾಗಗಳಲ್ಲಿ ನಿರ್ವಾಹಕರ ನೇಮಕ ಸಂದರ್ಭದಲ್ಲಿ ಅವ್ಯವಹಾರ ನಡೆದಿದೆ ಎಂಬ ಬಗ್ಗೆ ಸರ್ಕಾರದ ಗಮನಕ್ಕೆ ಬಂದಿದೆಯೇ ?

ಆ) ಈ ಸಂಬಂಧವಾಗಿ ಯಾವುದಾದರೂ ವಿಚಾರಣೆಗೆ ಆದೇಶ ಮಾಡಲಾಗಿದೆಯೇ ?

ಇ) ಹಾಗಿದ್ದಲ್ಲಿ, ಸಂಬಂಧಪಟ್ಟವರ ಮೇಲೆ ಯಾವ ಕ್ರಮ ತೆಗೆದುಕೊಳ್ಳಲಾಗಿದೆ ?

ಈ) ಹೊಸ ನೇಮಕಾತಿಯನ್ನು ಈ ಹುದ್ದೆಗಳಿಗೆ ಯಾವಾಗ ಮಾಡಲಾಗುವುದು ?

ಶ್ರೀ ಕೆ. ಜೆ. ಜಾರ್ಜ್(ಆಹಾರ ಮತ್ತು ನಾಗರೀಕ ಸರಬರಾಜು ಮತ್ತು ಸಾರಿಗೆ ಮಂತ್ರಿಗಳು).—

ಅ) ಇಲ್ಲ.

ಆ) ಉದ್ಭವಿಸುವುದಿಲ್ಲ.

ಇ) ಉದ್ಭವಿಸುವುದಿಲ್ಲ.

ಈ) ಹೊಸದಾಗಿ ನೇಮಕ ಮಾಡುವುದನ್ನು ಸದ್ಯಕ್ಕೆ ಸ್ಥಗಿತಗೊಳಿಸಲಾಗಿದೆ.

ಬೆಂಗಳೂರು ನಗರದಲ್ಲಿ ಕಾರ್ಯಾಚರಣೆ ಮಾಡಲಾಗುತ್ತಿರುವ ವಾಹನಗಳ ಬಗ್ಗೆ

೪೩೫. ಶ್ರೀ ಡಿ. ಬಿ. ಚಂದ್ರೇಗೌಡ (ತೀರ್ಥಹಳ್ಳಿ).— ಮಾನ್ಯ ಆಹಾರ ಮತ್ತು ನಾಗರೀಕ ಸರಬರಾಜು ಮತ್ತು ಸಾರಿಗೆ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ಬೆಂಗಳೂರು ನಗರದಲ್ಲಿ ಕಾರ್ಯಾಚರಣೆ ಮಾಡಲಾಗುತ್ತಿರುವ ಬೆಂಗಳೂರು ನಗರ ಸಾರಿಗೆ ವಿಭಾಗದ ಒಟ್ಟು ವಾಹನಗಳೆಷ್ಟು ?

ಆ) ಬೆಂಗಳೂರು ನಗರ ಸಾರಿಗೆ ವಿಭಾಗವು ಸದ್ಯದಲ್ಲಿ ಹೊಂದಿರುವ ವಾಹನಗಳು ಸಾರಿಗೆ ಬೇಡಿಕೆಯನ್ನು ಪೂರೈಸಲು ಸಾಕಾಗುವುದಿಲ್ಲವೆಂಬ ವಿಷಯವು ಸರ್ಕಾರದ ಗಮನಕ್ಕೆ ಬಂದಿದೆಯೆ ?

ಇ) ಬೆಂಗಳೂರು ನಗರ ಸಾರಿಗೆ ವಾಹನಗಳ ಸಂಖ್ಯೆಯನ್ನು ಹೆಚ್ಚಿಸುವ ಉದ್ದೇಶಕ್ಕಾಗಿ, ಸರ್ಕಾರವು ವಿಶ್ವಬ್ಯಾಂಕ್‌ನ ಸಹಾಯಕ್ಕಾಗಿ ಸಂಪರ್ಕಿಸಿದೆಯೇ ?

ಶ್ರೀ ಕೆ. ಜೆ. ಜಾರ್ಜ್ (ಆಹಾರ ಮತ್ತು ನಾಗರೀಕ ಸರಬರಾಜು ಮತ್ತು ಸಾರಿಗೆ ರಾಜ್ಯ ಮಂತ್ರಿಗಳು).—

ಅ) ೧,೬೧೪

ಆ) ಹೌದು

ಇ) ಹೌದು.